SAMYUKTA KARNATAKA
# ಸಂಯುಕ್ತ ಕರ್ನಾಟಕ
ಕನ್ನಡಿಗರ ಸಾಕ್ಷಿಪ್ರಜ್ಞೆ

## ಚರ್ಚೆಗೆ ಅಧಿವೇಶನದಲ್ಲಿ ಅವಕಾಶ | ವಿಕಸನಗೊಳ್ಳುತ್ತಿರುವ ಮಕ್ಕಳ ಅಭಿವೃದ್ಧಿ

# ಮಕ್ಕಳ ಹಕ್ಕುಗಳ ರಕ್ಷಣೆ ಎಲ್ಲರ ಕರ್ತವ್ಯ: ಹೊರಟ್ಟಿ

**ಸಂ.ಕ.ಸಮಾಚಾರ, ಬೆಂಗಳೂರು**

ಮಕ್ಕಳ ಹಕ್ಕುಗಳ ರಕ್ಷಣೆಯು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ. ಕರ್ನಾಟಕದಲ್ಲಿನ ಮಕ್ಕಳ ಸಮಸ್ಯೆಗಳು ಹಾಗೂ ಪರಿಹಾರಗಳ ಕುರಿತ ವಿಷಯಗಳನ್ನು ಮಂಡಿಸಲು ಈ ಬಾರಿ ನಡೆಯುವ ವಿಧಾನಸಭೆ ಅಧಿವೇಶನದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಕುರಿತ ಚರ್ಚೆಗೆ ಒಂದು ದಿನ ಕ್ರಮವಹಿಸಲಾಗುವುದು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಹೇಳಿದರು.

ವಿಕಾಸಸೌಧದ ಸಭಾಂಗಣದಲ್ಲಿ ಸೋಮವಾರ ನಡೆದ ರಾಜ್ಯ ಮಟ್ಟದ ಸಮಾಲೋಚನಾ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತ ದಿನಮಾನಗಳಲ್ಲಿ ಬದಲಾಗುತ್ತಿರುವ ಜಗತ್ತಿನಲ್ಲಿ ಮಕ್ಕಳ ಅಭಿವೃದ್ಧಿಯು ಸಹ ಕಾಲಕ್ರಮೇಣ ವಿಕಸನಗೊಳ್ಳುತ್ತಿದ್ದು, ಮಕ್ಕಳು ಪ್ರಶ್ನಾತೀತ ಮನವೋಭಾವವನ್ನು ಬೆಳೆಸಿಕೊಂಡು ಪ್ರಜಾಸತ್ತಾತ್ಮಕ ನಿಲುವುಗಳನ್ನು ಹೊಂದುತ್ತಿರುವುದರಿಂದ ಇಂದಿನ ಮಕ್ಕಳೇ ಇಂದಿನ ಪ್ರಜೆಗಳು ಎನ್ನುವ ಮಾತು ಸರ್ವ ಕಾಲಕ್ಕೂ ಸತ್ಯ ಎಂದು ತಿಳಿಸಿದರು.

ಪೌರಾಡಳಿತ ಇಲಾಖೆ ಸಚಿವ ರಹೀಂ ಖಾನ್ ಮಾತನಾಡಿ, ಮಕ್ಕಳ ವಿಶೇಷ ನಗರಸಭೆ ಆಯೋಜಿಸಲು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಅವರು ಮನವಿ ಮಾಡಿದ್ದನ್ನು ಪರಿಗಣಿಸಿ, ಮಕ್ಕಳ ಸಮಸ್ಯೆಗಳನ್ನು ಆಲಿಸಿ, ತ್ವರಿತ ಪರಿಹಾರ ಒದಗಿಸಲು ನಗರ ಪ್ರದೇಶಗಳಲ್ಲಿಯೂ ಸಹ ಮಕ್ಕಳ ವಿಶೇಷ ನಗರಸಭೆ ಆಯೋಜಿಸಲು ಸುತ್ತೋಲೆ ಹೊರಡಿಸುವಂತೆ ಇಲಾಖಾ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.



ವಿಕಾಸಸೌಧದ ಸಭಾಂಗಣದಲ್ಲಿ ಸೋಮವಾರ ನಡೆದ ರಾಜ್ಯ ಮಟ್ಟದ ಸಮಾಲೋಚನಾ ಸಭೆಯನ್ನು ಉದ್ಘಾಟಿಸಿದ ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್. ಹೊರಟ್ಟಿ.

ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕ ರವೀಂದ್ರ ಪಿ.ಎನ್., ಮಕ್ಕಳ ರಕ್ಷಣಾ ನಿರ್ದೇಶನಾಲಯದ ನಿರ್ದೇಶಕಿ ಡಾ.ಸ್ನೇಹಾ ಸಿ.ವಿ., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕ ಮಹೇಶ್ ಬಾಬು ಎನ್., ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ.ತಿಪ್ಪೇಸ್ವಾಮಿ, ಅಪರ್ಣಾ ಎಂ. ಕೊಳ್ಳಾ, ಕಾರ್ಯದರ್ಶಿ ಇಂದಿರಮ್ಮ ಜಿ. ಸೇರಿದಂತೆ ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಹಾಗೂ ಮಹಾನಗರ ಪಾಲಿಕೆಯ ಅಧಿಕಾರಿಗಳು ಉಪಸ್ಥಿತರಿದ್ದರು.

> ನಗರ ಪ್ರದೇಶಗಳಲ್ಲಿಯೂ ಗ್ರಾಮ ಪಂಚಾಯತ್ ಮಾದರಿಯಲ್ಲಿ "ಮಕ್ಕಳ ವಿಶೇಷ ನಗರ ಸಭೆ" ಆಯೋಜನೆ ಮಾಡಲು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ನಗರ ಮಕ್ಕಳ ಸಮಸ್ಯೆಗಳನ್ನು ನೇರವಾಗಿ ಆಲಿಸಿ, ಅವರಿಗೆ ಸೂಕ್ತ ಶಿಕ್ಷಣ, ಆರೋಗ್ಯ, ರಕ್ಷಣೆ ಮತ್ತು ಭಾಗವಹಿಸುವಿಕೆ ಹಕ್ಕುಗಳನ್ನು ಖಚಿತಪಡಿಸಿಕೊಳ್ಳುವ ಉದ್ದೇಶ ಹೊಂದಲಾಗಿದೆ.
>
> ▪ ಶಶಿಧರ್ ಎಸ್. ಕೋಸಂಬೆ
> | ರಾಜ್ಯ ಮಾನವ ಹಕ್ಕುಗಳ ರಕ್ಷಣಾ ಆಯೋಗ ಅಧ್ಯಕ್ಷರು

VK ವಿಜಯ ಕರ್ನಾಟಕ
e-paper

# ಸದನದಲ್ಲಿ ಮಕ್ಕಳ ಹಕ್ಕು ರಕ್ಷಣೆ ಚರ್ಚೆ

**ಬೆಂಗಳೂರು:** ಅಧಿವೇಶನದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ, ಮಕ್ಕಳ ಸಮಸ್ಯೆಗಳು ಹಾಗೂ ಪರಿಹಾರಗಳ ಕುರಿತ ಚರ್ಚೆಗೆ ಒಂದು ದಿನ ನಿಗದಿ ಮಾಡಲಾಗುವುದು ಎಂದು ಸಭಾಪತಿ ಬಸವರಾಜ ಎಸ್. ಹೊರಟ್ಟಿ ಭರವಸೆ ನೀಡಿದರು.



ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ವಿಕಾಸಸೌಧದಲ್ಲಿ ಸೋಮವಾರ ಆಯೋಜಿಸಿದ್ದ 'ನಗರಾಡಳಿತಗಳಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ' ಕುರಿತ ರಾಜ್ಯಮಟ್ಟದ ಸಮಾಲೋಚನಾ ಸಭೆಯಲ್ಲಿ ಮಾತನಾಡಿ ''ಪ್ರತಿಯೊಬ್ಬರ ಜೀವಿತಾವಧಿಯಲ್ಲಿ ಬಾಲ್ಯ ಮಹತ್ತರ ಪಾತ್ರ ವಹಿಸುತ್ತದೆ. ''ಕುಟುಂಬದಲ್ಲಿ ಸಂವಹನದ ಕೊರತೆಯಿಂದ ಉಂಟಾಗುವ ಅಸಮಾಧಾನಗಳು ಮಕ್ಕಳ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿರುತ್ತದೆ. ಮಕ್ಕಳ ರಕ್ಷಣೆ, ಉತ್ತಮ ಸಂಸ್ಕಾರ ಹಾಗೂ ಸುರಕ್ಷಿತ ಭವಿಷ್ಯ ನಿರ್ಮಾಣ ನಮ್ಮ ಜವಾಬ್ದಾರಿ,'' ಎಂದರು.

ಸಚಿವ ರಹೀಂ ಖಾನ್ ಮಾತನಾಡಿ, ''ಮಕ್ಕಳ ಸಮಸ್ಯೆ ಆಲಿಸಿ, ತ್ವರಿತ ಪರಿಹಾರ ಒದಗಿಸಲು ನಗರ ಪ್ರದೇಶಗಳಲ್ಲಿಯೂ ಮಕ್ಕಳ ವಿಶೇಷ ನಗರಸಭೆ ಆಯೋಜಿಸಲು ಸುತ್ತೋಲೆ ಹೊರಡಿಸಲಾಗುವುದು,'' ಎಂದರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ, ಮಕ್ಕಳ ಹಕ್ಕುಗಳ ಕಾಯಿದೆ ಕುರಿತು ಯುನಿಸೆಫ್‌ನ ಸಂಯೋಜಕ ರಾಘವೇಂದ್ರ ಭಟ್ ಉಪನ್ಯಾಸ ನೀಡಿದರು.

Main Edition
Mar 03, 2026 Page No. 3

ವಿಶ್ವವಾಣಿ
ವಿಶ್ವಾಸವೇ ವಿಶ್ವ

ರಾಜ್ಯ ಮಟ್ಟದ ಸಮಾಲೋಚನಾ ಸಭೆ | ಮಕ್ಕಳಿಗೆ ಸಂಸ್ಕಾರ ನೀಡುವುದು ಜವಾಬ್ದಾರಿ: ಹೊರಟ್ಟಿ

# ಮಕ್ಕಳ ಹಕ್ಕುಗಳ ರಕ್ಷಣೆ ನಮ್ಮೆಲ್ಲರ ಕರ್ತವ್ಯ

**ಬೆಂಗಳೂರು:** ಮಕ್ಕಳ ಹಕ್ಕುಗಳ ರಕ್ಷಣೆಯು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ. ಕರ್ನಾಟಕದಲ್ಲಿನ ಮಕ್ಕಳ ಸಮಸ್ಯೆಗಳು ಹಾಗೂ ಪರಿಹಾರಗಳ ಕುರಿತ ವಿಷಯಗಳನ್ನು ಮಂಡಿಸಲು ಈ ಬಾರಿ ನಡೆಯುವ ವಿಧಾನಸಭೆ ಅಧಿವೇಶನದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಕುರಿತ ಚರ್ಚೆಗೆ ಒಂದು ದಿನ ಕ್ರಮವಹಿಸಲಾಗುವುದು ಎಂದು ವಿಧಾನ ಪರಿಷತ್‌ನ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

ವಿಕಾಸಸೌಧದ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ರಾಜ್ಯ ಮಟ್ಟದ ಮಕ್ಕಳ ಹಕ್ಕುಗಳ ಸಮಾಲೋಚನಾ ಸಭೆ ಉದ್ಘಾಟಿಸಿ ನಂತರ ಮಾತನಾಡಿದ ಅವರು, ಪ್ರಸ್ತುತ ದಿನಮಾನಗಳಲ್ಲಿ ಬದಲಾಗುತ್ತಿರುವ ಜಗತ್ತಿನಲ್ಲಿ ಮಕ್ಕಳ ಅಭಿವೃದ್ಧಿಯು ಸಹ ಕಾಲ ಕ್ರಮೇಣ ವಿಕಸನಗೊಳ್ಳುತ್ತಿದ್ದು, ಮಕ್ಕಳು ಪ್ರಶ್ನಾತೀತ ಮನವೋಭಾವ ಬೆಳೆಸಿಕೊಂಡು ಪ್ರಜಾಸಾತತ್ಮಕ ನಿಲುವುಗಳನ್ನು ಹೊಂದುತ್ತಿರುವುದರಿಂದ ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು ಎನ್ನುವ ಮಾತು ಸರ್ವ ಕಾಲಕ್ಕೂ ಸತ್ಯ ಎಂದರು.

ಕುಟುಂಬದಲ್ಲಿ ಸಂವಹನದ ಕೊರತೆಯಿಂದ ಉಂಟಾಗುವ ಅಸಮಾಧಾನಗಳು ಮಕ್ಕಳ ಮೇಲೆ ದುಷ್ಪರಿಣಾಮ ಬೀರುವ ಸಂಭವವಿದೆ. ಅಲ್ಪ ವಿಷಯಗಳಿಂದ ಕುಟುಂಬಗಳಲ್ಲಿ ಭಿನ್ನಾಭಿಪ್ರಾಯಗಳು ಉಂಟಾಗಿ, ಮಕ್ಕಳ ಮನಸ್ಸಿನ ಮೇಲೆ ಪರಿಣಾಮ ಬೀರುತ್ತದೆ. ಮಕ್ಕಳ ರಕ್ಷಣೆ, ಉತ್ತಮ ಸಂಸ್ಕಾರ ಹಾಗೂ ಸುರಕ್ಷಿತ ಭವಿಷ್ಯ ನಿರ್ಮಾಣ ನಮ್ಮೆಲ್ಲರ ಜವಾಬ್ದಾರಿ ಎಂದರು.

ಪೌರಾಡಳಿತ ಇಲಾಖಾ ಸಚಿವ ರಹೀಂ ಖಾನ್ ಮಾತನಾಡಿ, ಮಕ್ಕಳ ವಿಶೇಷ ನಗರಸಭೆ ಆಯೋಜಿಸಲು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಅವರು ಮನವಿ ಮಾಡಿದ್ದನ್ನು ಪರಿಗಣಿಸಿ, ಮಕ್ಕಳ ಸಮಸ್ಯೆಗಳನ್ನು ಆಲಿಸಿ, ತ್ವರಿತ ಪರಿಹಾರ ಒದಗಿಸಲು ನಗರ ಪ್ರದೇಶಗಳಲ್ಲಿಯೂ ಸಹ ಮಕ್ಕಳ ವಿಶೇಷ ನಗರಸಭೆ ಆಯೋಜಿಸಲು ಸುತ್ತೋಲೆ ಹೊರಡಿಸುವಂತೆ ಇಲಾಖಾ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಈ ವೇಳೆ ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕ ರವೀಂದ್ರ, ಪಿ.ಎನ್, ಮಕ್ಕಳ ರಕ್ಷಣಾ ನಿರ್ದೇಶನಾಲಯದ ನಿರ್ದೇಶಕ ಡಾ.ಸ್ನೇಹಾ ಸಿ.ವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕ ಮಹೇಶ್ ಬಾಬು.ಎನ್, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.




ಮಕ್ಕಳ ಹಕ್ಕುಗಳ ರಾಜ್ಯಮಟ್ಟದ ಸಮಾಲೋಚನಾ ಸಭೆಯನ್ನು ವಿಧಾನ ಪರಿಷತ್‌ನ ಸಭಾಪತಿ ಬಸವರಾಜ ಎಸ್. ಹೊರಟ್ಟಿ ಉದ್ಘಾಟಿಸಿದರು. ಈ ವೇಳೆ ಸಚಿವ ರಹೀಂ ಖಾನ್, ರಾಜ್ಯಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಸೇರಿ ಇನ್ನಿತರರು ಉಪಸ್ಥಿತರಿದ್ದರು.


> ರಾಜ್ಯಾದ್ಯಂತ ದುಡಿಮೆಗಾಗಿ ಹಳ್ಳಿಗಳಿಂದ ನಗರ ಪ್ರದೇಶಗಳಿಗೆ ಜನಸಾಮಾನ್ಯರು ತಮ್ಮ ಮಕ್ಕಳೊಂದಿಗೆ ವಲಸೆ ಬರುತ್ತಿರುವ ಹಿನ್ನೆಲೆಯಲ್ಲಿ, ಅಂತಹ ಮಕ್ಕಳ ಶಿಕ್ಷಣ, ರಕ್ಷಣೆ ಹಾಗೂ ಸಮಗ್ರ ಪೋಷಣೆ ಸಕಾರಗೊಳ್ಳಲು ಪ್ರತಿಯೊಬ್ಬ ಅಧಿಕಾರಿಯೂ ಮಕ್ಕಳ ಪರ ಕಾರ್ಯಪ್ರವೃತ್ತರಾಗಬೇಕು. ಮಕ್ಕಳ ಹಕ್ಕುಗಳ ಸಮಸ್ಯೆಗಳನ್ನು ಆಲಿಸಲು ಇದುವರೆಗೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಾತ್ರ ಮಕ್ಕಳ ವಿಶೇಷ ಗ್ರಾಮಸಭೆಗಳನ್ನು ನಡೆಸಲಾಗುತ್ತಿತ್ತು.
>
> **- ಶಶಿಧರ್ ಕೋಸಂಬೆ ಅಧ್ಯಕ್ಷ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ**

> ರಾಜ್ಯ ವ್ಯಾಪ್ತಿಯ ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಹಾಗೂ ಮಹಾನಗರ ಪಾಲಿಕೆಯ ಅಧಿಕಾರಿಗಳು ಸಕಾಲಕ್ಕೆ ಮಕ್ಕಳ ವಿಶೇಷ ನಗರಸಭೆ ಏರ್ಪಡಿಸುವರೊಂದಿಗೆ ಮಕ್ಕಳ ಸಮಸ್ಯೆಗಳನ್ನು ಇತ್ಯರ್ಥಗೊಳಿಸಬೇಕು. ಸಂಬಂಧಿಸಿದ ಅಧಿಕಾರಿಗಳು ಸಭೆಯ ಮೇಲ್ವಿಚಾರಣೆ ಕೈಗೊಳ್ಳಬೇಕು.
>
> **-ರಹೀಂ ಖಾನ್, ಸಚಿವ**

### ಅಧಿವೇಶನದಲ್ಲಿ ಮಂಡಿಸಲು ಕ್ರಮ: ಹೊರಟ್ಟಿ

# ಸದನದಲ್ಲಿ ಹಕ್ಕುಗಳ ರಕ್ಷಣೆ ಕುರಿತು ಚರ್ಚೆ

**ಬೆಂಗಳೂರು:** ರಾಜ್ಯದಲ್ಲಿನ ಮಕ್ಕಳ ಸಮಸ್ಯೆಗಳು ಹಾಗೂ ಪರಿಹಾರಗಳ ಕುರಿತ ವಿಷಯಗಳನ್ನು ಮಂಡಿಸಲು ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆ ಕುರಿತು ಚರ್ಚೆಗೆ ಈ ಬಾರಿಯ ವಿಧಾನಸಭೆ ಅಧಿವೇಶನದಲ್ಲಿ ಒಂದು ದಿನ ಮೀಸಲಿಡಲು ಕ್ರಮವಹಿಸಲಾಗುವುದು ಎಂದು ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.



ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ವತಿಯಿಂದ ನಗರಾಡಳಿತಗಳಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಕುರಿತು ವಿಕಾಸಸೌಧದ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ರಾಜ್ಯ ಮಟ್ಟದ ಸಮಾಲೋಚನಾ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು. ಮಕ್ಕಳ ಹಕ್ಕುಗಳ ರಕ್ಷಣೆಯು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ. ಪ್ರಸ್ತುತ ದಿನಮಾನಗಳಲ್ಲಿ ಬದಲಾಗುತ್ತಿರುವ ಜಗತ್ತಿನಲ್ಲಿ ಮಕ್ಕಳ ಅಭಿವೃದ್ಧಿಯು ಸಹ ಕಾಲ ಕ್ರಮೇಣ ವಿಕಸನ ಗೊಳ್ಳುತ್ತಿದ್ದು, ಮಕ್ಕಳು ಪ್ರಶ್ನಾತೀತ ಮನಸ್ಸೋಭಾವವನ್ನು ಬೆಳೆಸಿಕೊಂಡು ಪ್ರಜಾಸಾತತ್ಮಕ ನಿಲುವುಗಳನ್ನು ಹೊಂದುತ್ತಿರುವುದರಿಂದ ಇಂದಿನ ಮಕ್ಕಳೇ ಇಂದಿನ ಪ್ರಜೆಗಳು ಎನ್ನುವ ಮಾತು ಸರ್ವ ಕಾಲಕ್ಕೂ ಸತ್ಯ ಎಂದು ಎಂದು ತಿಳಿಸಿದರು.

> **ರಾಜ್ಯಾದ್ಯಂತ ದುಡಿಮೆಗಾಗಿ ಹಳ್ಳಿಗಳಿಂದ ನಗರ ಪ್ರದೇಶಗಳಿಗೆ ಜನಸಾಮಾನ್ಯರು ತಮ್ಮ ಮಕ್ಕಳೊಂದಿಗೆ ಧಾವಿಸುತ್ತಾರೆ. ಅಂತಹ ಮಕ್ಕಳ ಶಿಕ್ಷಣ, ರಕ್ಷಣೆ ಹಾಗೂ ಪೋಷಣೆ ಸಕಾರಗೊಳಿಸಲು ಪ್ರತಿಯೊಬ್ಬ ಅಧಿಕಾರಿಗಳು ಮಕ್ಕಳ ಕಾರ್ಯಪ್ರವೃತ್ತರಾಗಬೇಕು.**
>
> ■ **ಶಶಿಧರ್ ಕೋಸಂಬೆ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ**

ಸಚಿವ ರಹೀಂ ಖಾನ್ ಮಾತನಾಡಿ, ಮಕ್ಕಳ ವಿಶೇಷ ನಗರಸಭೆ ಆಯೋಜಿಸಲು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಶಶಿಧರ್ ಕೋಸಂಬೆ ಅವರು ಮನವಿ ಮಾಡಿದ್ದನ್ನು ಪರಿಗಣಿಸಿ, ಮಕ್ಕಳ ಸಮಸ್ಯೆಗಳನ್ನು ಆಲಿಸಿ, ತ್ವರಿತ ಪರಿಹಾರ ಒದಗಿಸಲು ನಗರ ಪ್ರದೇಶಗಳಲ್ಲಿಯೂ ಸಹ ಮಕ್ಕಳ ವಿಶೇಷ ನಗರಸಭೆ ಆಯೋಜಿಸಲು ಸುತ್ತೋಲೆ ಹೊರಡಿಸುವಂತೆ ಇಲಾಖಾ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.